For more job news visit : www.kpscvaani.com

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ

ಟಿ. ಚೌಡಯ್ಯ ರಸ್ತೆ, ಕುಮಾರ ಪಾರ್ಕ್ ಪಶ್ಚಿಮ, ಬೆಂಗಳೂರು–560020.

ಸಂ: ಬೆಅಪ್ರಾ/ಆಯುಕ್ತರು/ಸಿಬ್ಬಂದಿ/198/2022–23 ದಿನಾಂಕ: 11.05.2022

ಪ್ರಕಟಣೆ

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಖಾಲಿ ಇರುವ ಪ್ರಥಮ ದರ್ಜೆ ಸಹಾಯಕ ಮತ್ತು ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳಿಗೆ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವವರೆಗೆ ಸರ್ಕಾರದ ವಿವಿಧ ಇಲಾಖೆಗಳಿಂದ ಪರಿತ್ಯಕ್ತ ನೌಕರರುಗಳನ್ನು ನಿಯೋಜನೆ ಮೂಲಕ ಭರ್ತಿ ಮಾಡಿಕೊಳ್ಳಲು ಸರ್ಕಾರವು ಅನುಮತಿ ನೀಡಿರುತ್ತದೆ.

ಅದರಂತೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಖಾಲಿ ಇರುವ 78 ಪ್ರಥಮ ದರ್ಜೆ ಸಹಾಯಕ ಮತ್ತು 98 ದ್ವಿತೀಯ ದರ್ಜೆ ಸಹಾಯಕ ಹುದ್ದೆಗಳಲ್ಲಿ ಈ ಕೆಳಗೆ ತಿಳಿಸಿರುವ ಅರ್ಹತಾ ಮಾನದಂಡಗಳನ್ನು ಪೂರೈಸುವ ಮತ್ತು ಪ್ರಾಧಿಕಾರದಲ್ಲಿ ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸಲು ಆಸಕ್ತಿ ಇರುವ ಸರ್ಕಾರದ ವಿವಿಧ ಇಲಾಖೆಯ ಅರ್ಹ ನೌಕರರು, ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಕುಮಾರ ಪಾರ್ಕ್ ಪಶ್ಚಿಮ, ಟಿ.ಚೌಡಯ್ಯ ರಸ್ತೆ, ಬೆಂಗಳೂರು–560020 ಇವರಿಗೆ ತಮ್ಮ ಇಲಾಖಾ ಮುಖ್ಯಸ್ಥರ ಮೂಲಕ **ದಿನಾಂಕ: 18.06.2022ರ** ಒಳಗಾಗಿ ಅರ್ಜಿ ಸಲ್ಲಿಸಲು ಕೋರಿದೆ. ಅಲ್ಲದೇ, ಅರ್ಜಿಯ ಒಂದು ಪ್ರತಿಯನ್ನು ನೇರವಾಗಿ ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವಂತೆ ತಿಳಿಸಿದೆ.

ಅರ್ಜಿಯಲ್ಲಿ ಕಡ್ಡಾಯವಾಗಿ ತುಂಬಬೇಕಾದ ವಿವರಗಳು:–

1) ನೌಕರರ ಹೆಸರು **2)** ಜನ್ಮ ದಿನಾಂಕ **3)** ಸರ್ಕಾರದ ಸೇವೆಗೆ ಸೇರಿದ ದಿನಾಂಕ **4)** ಇಲಾಖೆ **5)** ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಹುದ್ದೆ ಮತ್ತು ಕಛೇರಿ ವಿಳಾಸ **6)** ಇತರೆ ವಿದ್ಯಾರ್ಹತೆ ಮತ್ತು ಅನುಭವದ ಕುರಿತು ಅವಶ್ಯಕ ಮಾಹಿತಿಗಳನ್ನು ಸೇರಿಸಬಹುದು.

ಸ್ವೀಕೃತವಾದ ಎಲ್ಲಾ ಅರ್ಜಿಗಳನ್ನು ಸರ್ಕಾರದ ನಗರಾಭಿವೃದ್ಧಿ ಇಲಾಖೆಗೆ ಕಳುಹಿಸಿ ನಿಯೋಜನಾ ಆದೇಶವನ್ನು ಪಡೆದ ನಂತರ ಪ್ರಾಧಿಕಾರದಲ್ಲಿ ನಿಯೋಜನೆ ಮೇರೆಗೆ ನೇಮಿಸಿಕೊಳ್ಳಲಾಗುವುದು.

ಮಾನದಂಡಗಳು:– **1)** ಕಳೆದ 10 ವರ್ಷಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗದಿಂದ ನೇರವಾಗಿ ಪ್ರ.ದ.ಸ/ಎ.ದ.ಸ../ತತ್ಸಮಾನ ಹುದ್ದೆಗಳಿಗೆ ನೇಮಕವಾಗಿರುವವರಿಗೆ ಆದ್ಯತೆ ನೀಡಲಾಗುವುದು. **2)** ನಗರಾಭಿವೃದ್ಧಿ ಇಲಾಖೆ ಮತ್ತು ಕಂದಾಯ ಇಲಾಖೆಗಳಲ್ಲಿ ಪ್ರ.ದ.ಸ/ಎ.ದ.ಸ ಹಾಗೂ ತತ್ಸಮಾನ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ನಿಯೋಜನೆಗೆ ಆದ್ಯತೆ ನೀಡಲಾಗುವುದು. **3)** ನಿಯೋಜನೆಯು ಕರ್ನಾಟಕ ನಾಗರಿಕ ಸೇವಾ ನಿಯಮಗಳು 1958ರ ನಿರ್ದೇಶನಗಳಿಗೆ ಒಳಪಟ್ಟಿರುತ್ತದೆ.

ಸಹಿ/- ಆಯುಕ್ತರು, ಬೆಂ.ಅ.ಪ್ರಾ, ಬೆಂಗಳೂರು